ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	276
ಸದಸ್ಯರ ಹೆಸರು	:	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	04-03-2020
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

	ಪ್ರಶ್ನೆ	ಉತ್ತರ
(ಅ)	ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸುರಿದ ಭೀಕರ ಮಳೆಯಿಂದ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗೋಡು, ಗುಹ್ಯ ಹಾಗೂ ನೆಲ್ಯಿಹುದಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಟ್ಟದಕಾಡು ಕೊಂಡಂಗೇರಿ, ತೋರಾ ಗ್ರಾಮಗಳಲ್ಲಿ ಮನೆಗಳು ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಬಂದಿದ್ದಲ್ಲಿ, ಈ ಸಂತ್ರಸ್ಥರಿಗೆ ಬದಲಿ ನಿವೇಶನ ಹಾಗೂ ಶಾಶ್ವತ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆಯೇ;	ಸಂತ್ರಸ್ಥರಿಗೆ ಬದಲಿ ನಿವೇಶನ ಹಾಗೂ ಶಾಶ್ವತ ವಸತಿ ವ್ಯವಸ್ಥೆ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.
(ಇ)	ಇದುವರೆಗೆ ನಿವೇಶನ ನೀಡಲಾಗದಿದ್ದ ಪಕ್ಷದಲ್ಲಿ ಬದಲಿ ನಿವೇಶನ ಕಲ್ಪಿಸುವ ಸಲುವಾಗಿ ಜಾಗಗಳನ್ನು ಗುರ್ತಿಸಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)	2019-20ನೇ ಸಾಲಿನ ಪ್ರಕೃತಿ ವಿಕೋಪ ಸಂತ್ರಸ್ಥರಿಗೆ ಬದಲಿ ನಿವೇಶನ ಕಲ್ಪಿಸುವ ಸಲುವಾಗಿ ಸೋಮವಾರಪೇಟೆ ತಾಲ್ಲೂಕಿನ ಅಭ್ಯತ್‌ಮಂಗಲ ಗ್ರಾಮದ ಸ.ನಂ 87/2 ರಲ್ಲಿ 8.22 ಎಕ್ರೆ ಹಾಗೂ ವಿರಾಜಪೇಟೆ ತಾಲ್ಲೂಕಿನ ಬಿ.ಶೆಟ್ಟಿಗೇರಿ ಗ್ರಾಮದ ಸ.ನಂ.37/26 ರಲ್ಲಿ ಅಂದಾಜು 08 ಎಕ್ರೆ ಜಾಗವನ್ನು ಗುರುತಿಸಲು ಕ್ರಮ ವಹಿಸಲಾಗುತ್ತಿದೆ.

ಕಂಇ 100 ಟಿಎನ್‌ಆರ್ 2020

(ಆರ್. ಅಶೋಕ)
ಕಂದಾಯ ಸಚಿವರು